Phone: 91- 080-23330984
91- 080-23330149

NAAC A+ Accredited

Website: www.uasbangalore.edu.in
Email: registrar@uasbangalore.edu.in

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು
ಕುಲಸಚಿವರ ಕಛೇರಿ, ನಾಯಕ್ ಭವನ, ಗಾಕೃವಿಕೆ, ಬೆಂಗಳೂರು
UNIVERSITY OF AGRICULTURAL SCIENCES, BANGALORE
Office of the Registrar, Naik Bhavan, GKVK, Bengaluru 560065

ಸಂ: ಕು.ಸ./ಸಕುಸ/ಎಸ್‌ಎಫ್‌ಎ/ಡಿಪ್ಲೊಮಾ(ಕೃಷಿ) ಪ್ರವೇಶ/2025-26 ದಿನಾಂಕ: 16.06.2025

## ಅಧಿಸೂಚನೆ

ವಿಷಯ: 2025-26ನೇ ಶೈಕ್ಷಣಿಕ ವರ್ಷದಲ್ಲಿ ಎರಡು ವರ್ಷದ ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ ಅರ್ಜಿಯನ್ನು ಆಹ್ವಾನಿಸಿರುವುದರ ಬಗ್ಗೆ.

ಉಲ್ಲೇಖ: ಶಿಕ್ಷಣ ನಿರ್ದೇಶಕರು ಹಾಗೂ ಮಾನ್ಯ ಕುಲಪತಿಗಳು ಕೃವಿವಿ, ಬೆಂಗಳೂರು ಇವರ ಅನುಮೋದನೆಯ ದಿನಾಂಕ:14.06.2025.

***

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ಅಧೀನದಲ್ಲಿರುವ ಕೃಷಿ ಮಹಾವಿದ್ಯಾಲಯ, ವಿ.ಸಿ. ಫಾರಂ, ಮಂಡ್ಯದಲ್ಲಿ 2025-26ನೇ ಶೈಕ್ಷಣಿಕ ವರ್ಷದಲ್ಲಿ ಎರಡು ವರ್ಷದ ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಬೋಧನಾ ಕ್ರಮ ಮತ್ತು ಮಾಧ್ಯಮ:** ಡಿಪ್ಲೊಮಾ (ಕೃಷಿ) ಕೋರ್ಸನ್ನು ಕನ್ನಡ ಮಾಧ್ಯಮದಲ್ಲಿ ಸೆಮಿಸ್ಟರ್ (4 ಸೆಮಿಸ್ಟರ್) ಪದ್ಧತಿಯಲ್ಲಿ ಬೋಧಿಸಲಾಗುವುದು.

**ಪ್ರವೇಶ ಅರ್ಹತೆ:**

- ಕೃಷಿ ವಿಶ್ವವಿದ್ಯಾನಿಲಯದಲ್ಲಿ ಎರಡು ವರ್ಷದ ಡಿಪ್ಲೊಮಾ. (ಕೃಷಿ) ಕೋರ್ಸ್‌ಗೆ ಪ್ರವೇಶ ಕೋರುವ ಅಭ್ಯರ್ಥಿಗಳು ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಪಠ್ಯವನ್ನು ಭಾಷೆಯಾಗಿ ಅಭ್ಯಸಿಸಿ ಕನಿಷ್ಟ ಶೇ.45 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು (ಪ.ಜಾ./ಪ.ಪಂ./ಪ್ರವರ್ಗ-I ರವರುಗಳಿಗೆ ಕನಿಷ್ಠ ಶೇ.40 ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು).
- ದಿನಾಂಕ **18.07.2025** ರಂದು ಅಭ್ಯರ್ಥಿಗಳ ವಯಸ್ಸು **19** ವರ್ಷಗಳನ್ನು ಮೀರಿರಬಾರದು.
- ರೈತರ ಹಾಗು ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ.50ರಷ್ಟು ಸೀಟುಗಳನ್ನು ಡಿಪ್ಲೊಮಾ (ಕೃಷಿ) ಪ್ರವೇಶಾತಿಗೆ ಮೀಸಲಿಡಲಾಗಿದೆ.
- ಅರ್ಜಿ ಹಾಗೂ ಮಾಹಿತಿ ಪುಸ್ತಕವನ್ನು ಕೃಷಿ ವಿಶ್ವವಿದ್ಯಾನಿಲಯ ಜಿ.ಕೆ.ವಿ.ಕೆ., ಬೆಂಗಳೂರು-560065, ವೆಬ್‌ಸೈಟ್ www.uasbangalore.edu.in ನಲ್ಲಿ **ದಿನಾಂಕ 16.06.2025** ರಿಂದ **18.07.2025** ರವರೆಗೆ ಡೌನ್‌ಲೋಡ್ ಮಾಡಬಹುದು. ಈ ರೀತಿ ವೆಬ್‌ಸೈಟ್ ಮುಖಾಂತರ ಪಡೆದು ಭರ್ತಿಮಾಡಿದ ಅರ್ಜಿಗಳನ್ನು, ಅರ್ಜಿಯ ನಿಗದಿತ ಶುಲ್ಕವನ್ನು ಡಿ.ಡಿ. ರೂಪದಲ್ಲಿ ಲಗತ್ತಿಸಿ **ದಿನಾಂಕ. 18.07.2025** ರೊಳಗೆ ಕಳುಹಿಸಿಕೊಡಬೇಕು. **ದಿನಾಂಕ.19.07.2025ರ** ನಂತರ ಡಿ.ಡಿ. ಯನ್ನು ಪಡೆದು ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅರ್ಜಿ ಶುಲ್ಕ:**

- ಸಾಮಾನ್ಯ ವರ್ಗದವರಿಗೆ ರೂ. **500/-**ಪ.ಜಾ./ಪ.ಪಂ./ಪ್ರವರ್ಗ-I ರವರಿಗೆ ರೂ. **250/-**ಆಗಿದ್ದು, ರಾಷ್ಟ್ರೀಕೃತ ಬ್ಯಾಂಕ್‌ಗಳ (Nationalised Bank) ಮೂಲಕ ಡಿ.ಡಿ.ಯನ್ನು **Comptroller, UAS, Bangalore** ಇವರ ಹೆಸರಿನಲ್ಲಿ ಪಡೆದು ಎಲ್ಲಾ ಅಗತ್ಯ ಅಡಕಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು **ಕುಲಸಚಿವರು, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು-560065** ಇಲ್ಲಿಗೆ **ದಿನಾಂಕ 18.07.2025ರ (ಸಂಜೆ 4.00 ಗಂಟೆ) ಒಳಗೆ ತಲುಪುವಂತೆ** ಖುದ್ದಾಗಿ ಅಥವಾ ಅಂಚೆ ಮೂಲಕ ಕಳುಹಿಸಬಹುದು.

**ಪ್ರವೇಶ ಮತ್ತು ಆಯ್ಕೆ ವಿಧಾನ:**

- ಸರ್ಕಾರದ ಆದೇಶಗಳ ಅನ್ವಯ ಸೀಟುಗಳನ್ನು ಭರ್ತಿ ಮಾಡಲಾಗುವುದು.
- ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ, ಪ್ರವೇಶಕ್ಕೆ ಆಯ್ಕೆ ಮಾಡಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರ ಹಾಗೂ ವೆಬ್ ಸೈಟ್ ಮುಖಾಂತರ ತಿಳಿಸಲಾಗುವುದು.

**ಟಿಪ್ಪಣಿ:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಯಾವುದೇ ಉದ್ಯೋಗ ಭರವಸೆಯ ಆಧಾರದ ಮೇಲೆ ಮೇಲ್ಕಂಡ ಕೋರ್ಸ್‌ನ್ನು ನಡೆಸುವುದಿಲ್ಲ.

ಆದೇಶದ ಮೇರೆಗೆ

ಕೃವಿವಿ, ಜಿ.ಕೆ.ವಿ.ಕೆ ಕುಲಸಚಿವರು ಬೆಂಗಳೂರು - 560 065, ಭಾರತ

16/06/25

ಕುಲಸಚಿವರು

ಪ್ರತಿಗಳು:

1. ಶಿಕ್ಷಣ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.
2. ಡೀನ್ (ವಿದ್ಯಾರ್ಥಿ ಕಲ್ಯಾಣ), ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.
3. ಡೀನ್ (ಕೃಷಿ), ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂ ಮಂಡ್ಯ - ಮುಂದಿನ ಕ್ರಮಕ್ಕಾಗಿ.
4. ಪ್ರಾಂಶುಪಾಲರು, ಡಿಪ್ಲೊಮಾ(ಕೃಷಿ) ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂ ಮಂಡ್ಯ
5. ಸಹಾಯಕ ಕುಲಸಚಿವರು, ಕುಲಸಚಿವರ ಕಛೇರಿ, ಗಾ.ಕೃವಿ.ಕೇ ಕೃವಿವಿ., ಬೆಂಗಳೂರು.
6. ಕಾರ್ಯದರ್ಶಿಗಳು, ಕುಲಪತಿಗಳ ಕಛೇರಿ, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು-ಮಾಹಿತಿಗಾಗಿ.